All India Radio: Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

10.09.2026 19.35 hrs

---

ಮುಖ್ಯಾಂಶಗಳು

- ೫೦ನೇ ಇಮಾಮ್ ರಾಜಕುಮಾರ ೫ನೇ ರಹೀಮ್ ಅಗಾ ಖಾನ್ ಭಾರತಕ್ಕೆ ಭೇಟಿ; ರಾಷ್ಟ್ರಪತಿ, ಉಪರಾಷ್ಟ್ರಪತಿ ಸೇರಿ ಗಣ್ಯರೊಂದಿಗೆ ಮಾತುಕತೆ
- ಭಾರತದ ಮುಂದಿನ ಬಾಹ್ಯಾಕಾಶ ಕಾರ್ಯದಲ್ಲಿ ಭಾಗವಹಿಸಲು ಫ್ರಾನ್ಸ್ ಹಾಗೂ ಇತರೆ ರಾಷ್ಟ್ರಗಳಿಗೆ ಪ್ರಧಾನಿ ಆಹ್ವಾನ
- ನಾಡಿದ್ದು ದೆಹಲಿಯುಲ್ಲಿ ಬ್ರಿಕ್ಸ್ ಶೃಂಗಸಭೆ ಆರಂಭ; ವ್ಯಾಪಕ ಬಂದೋಬಸ್ತ್
- ಏಷ್ಯಾ ಕಪ್ ಹಾಕಿ: ಮಹಿಳಾ ಜೂನಿಯರ್ ಪಂದ್ಯಾವಳಿಯಲ್ಲಿ ಪಾಕಿಸ್ತಾನ ಮಣಿಸಿ ಕ್ವಾರ್ಟರ್ ಫೈನಲ್‌ನಲ್ಲಿ ಸೋಲಿಸಿ ಸೆಮಿಫೈನಲ್ ಪ್ರವೇಶಿಸಿದ ಭಾರತ

---

ಭಾರತದ ಆಹ್ವಾನದ ಮೇರೆಗೆ ನಿಜಾರಿ ಇಸ್ಮೈಲಿ ಸಮುದಾಯದ ೫೦ನೇ ಇಮಾಮ್ ರಾಜಕುಮಾರ ೫ನೇ ರಹೀಮ್ ಅಗಾ ಖಾನ್ ಭಾರತಕ್ಕೆ ಭೇಟಿ ನೀಡಿದ್ದಾರೆ. ನವದೆಹಲಿಗೆ ಆಗಮಿಸಿದ ಅವರನ್ನು ಭಾರತೀಯ ನಿಯೋಗ ಸ್ವಾಗತಿಸಿತು.

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ರಾಷ್ಟ್ರಪತಿ ಭವನದಲ್ಲಿ ರಹೀಮ್ ಅಗಾ ಖಾನ್ ಅವರನ್ನು ಭೇಟಿ ಮಾಡಿದರು. ಅಗಾ ಖಾನ್ ಅಭಿವೃದ್ಧಿ ಜಾಲದ ಕಾರ್ಯಗಳನ್ನು ರಾಷ್ಟ್ರಪತಿ ಶ್ಲಾಘಿಸಿದರು. ಸರ್ಕಾರದ ಸಹಭಾಗಿತ್ವದೊಂದಿಗೆ ಲಾಭರಹಿತ ಸಂಸ್ಥೆಗಳು ಕಾರ್ಯನಿರ್ವಹಿಸಿ ಜನರ ಜೀವನಮಟ್ಟ ಸುಧಾರಿಸಲು ಸಾಧ್ಯ ಎಂಬುದಕ್ಕೆ ಇದು ಉತ್ತಮ ಉದಾಹರಣೆ ಎಂದು ಅವರು ಹೇಳಿದರು.

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಉಪರಾಷ್ಟ್ರಪತಿ ಭವನದಲ್ಲಿ ಸಮಾಜಸೇವಕ ರಹೀಮ್ ಅಗಾ ಖಾನ್ ಅವರನ್ನು ಭೇಟಿ ಮಾಡಿದರು.

ಅಗಾ ಖಾನ್ ಅಭಿವೃದ್ಧಿ ಜಾಲದ ನೀರು ಮತ್ತು ನೈರ್ಮಲ್ಯ, ಮಹಿಳಾ ಸ್ವಸಹಾಯ ಸಂಘಗಳು, ಶಿಕ್ಷಣ, ಕ್ರೀಡೆ ಹಾಗೂ ಸಮುದಾಯ ಅಭಿವೃದ್ಧಿ ಕ್ಷೇತ್ರಗಳ ಕೊಡುಗೆ ಕುರಿತು ಇಬ್ಬರೂ ಚರ್ಚಿಸಿದರು. ಆಮೂಲಾಗ್ರೀಕರಣವನ್ನು ನಿರ್ಮೂಲನೆ ಮಾಡುವ ಅಗತ್ಯವನ್ನು ಇಬ್ಬರೂ ನಾಯಕರು ಒತ್ತಿ

ಹೇಳಿದ್ದು, ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗೆ ಸಂವಾದವೇ ಮಾರ್ಗ ಎಂದು ಸಾಮಾಜಿಕ ಜಾಲತಾಣದಲ್ಲಿ ಉಪರಾಷ್ಟ್ರಪತಿ ಅಭಿಪ್ರಾಯಪಟ್ಟರು.

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿ ಇಂದು ರಹೀಂ ಅಗಾ ಖಾನ್ ಅವರನ್ನು ಭೇಟಿಯಾದರು.

ಅಭಿವೃದ್ಧಿ ಪ್ರಯತ್ನಗಳಿಗೆ ದಿವಂಗತ ಆನೇ ಅಗಾ ಖಾನ್ ಅವರು ನೀಡಿದ ನಿರಂತರ ಕೊಡುಗೆಗಳನ್ನು ಸ್ಮರಿಸಿದರು. ಆರೋಗ್ಯ ರಕ್ಷಣೆ, ಕೃಷಿ, ಗ್ರಾಮೀಣಾಭಿವೃದ್ಧಿ, ಯುವಜನರು ಮತ್ತು ಮಹಿಳಾ ಸಬಲೀಕರಣದಲ್ಲಿ ಅಗಾ ಖಾನ್ ಅಭಿವೃದ್ಧಿ ಜಾಲದೊಂದಿಗೆ ಭಾರತದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳನ್ನು ಚರ್ಚಿಸಿರುವುದಾಗಿ ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ತಿಳಿಸಿದ್ದಾರೆ.

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಸಹ ರಹೀಮ್ ಅಗಾ ಖಾನ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್ ಅವರು ಅಗಾ ಖಾನ್ ಅಭಿವೃದ್ಧಿ ಜಾಲದ ಸಾಮಾಜಿಕ ಅಭಿವೃದ್ಧಿ ಮತ್ತು ಪರಂಪರೆಯ ಸಂರಕ್ಷಣೆಯಲ್ಲಿನ ಪ್ರಭಾವಶಾಲಿ ಕಾರ್ಯಗಳ ಕುರಿತು ಚರ್ಚಿಸಿರುವುದಾಗಿ ಹೇಳಿದ್ದಾರೆ.

---

ಭಾರತದ ಮುಂದಿನ ಹಂತದ ಬಾಹ್ಯಾಕಾಶ ಪರಿಶೋಧನೆಯಲ್ಲಿ ಪಾಲುದಾರಿಕೆ ಮಾಡಿಕೊಳ್ಳಲು ಫ್ರಾನ್ಸ್ ಮತ್ತು ಇತರ ದೇಶಗಳನ್ನು ಪ್ರಧಾನಿ ನರೇಂದ್ರ ಮೋದಿ ಆಹ್ವಾನಿಸಿದರು.

ಗುರುವಾರ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಪ್ಯಾರಿಸ್‌ನಲ್ಲಿ ನಡೆದ ಮೊದಲ ಅಂತರರಾಷ್ಟ್ರೀಯ ಬಾಹ್ಯಾಕಾಶ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ, ದೇಶದ ಬಾಹ್ಯಾಕಾಶ ಸಾಮರ್ಥ್ಯಗಳ ತ್ವರಿತ ಬೆಳವಣಿಗೆ ಮತ್ತು ಖಾಸಗಿ ಬಾಹ್ಯಾಕಾಶ ವಲಯದ ಮಹತ್ವವನ್ನು ವಿವರಿಸಿದರು.

ಭಾರತದ ಬಾಹ್ಯಾಕಾಶ ಕಾರ್ಯಕ್ರಮವು ಜಾಗತಿಕ ಸಹಕಾರದ ತತ್ವಶಾಸ್ತ್ರ ಮತ್ತು ಬಾಹ್ಯಾಕಾಶ ತಂತ್ರಜ್ಞಾನದ ಪ್ರಯೋಜನಗಳು ಎಲ್ಲಾ ಮಾನವೀಯತೆಯನ್ನು ತಲುಪಬೇಕು ಎಂಬ ನಂಬಿಕೆಯಿಂದ ಮಾರ್ಗದರ್ಶಿಸಲ್ಪಟ್ಟಿದೆ ಎಂದು ಅವರು ಹೇಳಿದರು.

ಭಾರತದ ವಿಚಾರಧಾರೆ ವಸುಧೈವ ಕುಟುಂಬಕಂ ಅಥವಾ ಒಂದು ಭೂಮಿ, ಒಂದು ಕುಟುಂಬ, ಒಂದು ಭವಿಷ್ಯವನ್ನು ಆಧರಿಸಿದೆ. ಅಂತಾರಾಷ್ಟ್ರೀಯ ಕಾನೂನು, ಸಂವಾದ ಮತ್ತು ಬಹುಪಕ್ಷೀಯ ಸಹಕಾರದ ಆಧಾರದ ಮೇಲೆ ಸುರಕ್ಷಿತ, ಶಾಂತಿಯುತ ಹಾಗೂ ಸುಸ್ಥಿರ ಬಾಹ್ಯಾಕಾಶ ಕ್ಷೇತ್ರಕ್ಕೆ ಪ್ರಧಾನಿ ಕರೆ ನೀಡಿದರು.

ಬಾಹ್ಯಾಕಾಶ ವಲಯದಲ್ಲಿ ಭಾರತದ ಸಾಧನೆಗಳನ್ನು ವಿವರಿಸಿದ ಪ್ರಧಾನಿ, ರೈತರು, ಮೀನುಗಾರರು, ಹವಾಮಾನ ಮುನ್ಸೂಚನೆ ಮತ್ತು ವಿಪತ್ತು ನಿರ್ವಹಣೆಗಳನ್ನು ಬೆಂಬಲಿಸುವ ವೆಚ್ಚ-ಪರಿಣಾಮಕಾರಿ ಕಾರ್ಯಾಚರಣೆಗಳು ಮತ್ತು ತಂತ್ರಜ್ಞಾನಗಳನ್ನು ತಲುಪಿಸುವಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಜಾಗತಿಕ ಮನ್ನಣೆ ಗಳಿಸಿದೆ ಎಂದು ಹೇಳಿದರು.

೩೪ ದೇಶಗಳಿಂದ ೪೩೦ ಕ್ಕೂ ಹೆಚ್ಚು ಉಪಗ್ರಹಗಳನ್ನು ಭಾರತೀಯ ರಾಕೆಟ್‌ಗಳಲ್ಲಿ ಉಡಾವಣೆ ಮಾಡಲಾಗಿದೆ ಎಂದು ಅವರು ಹೇಳಿದರು, ಇದು ಭಾರತದ ಬಾಹ್ಯಾಕಾಶ ಸಾಮರ್ಥ್ಯಗಳಲ್ಲಿ ಬೆಳೆಯುತ್ತಿರುವ ಅಂತರರಾಷ್ಟ್ರೀಯ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ.

ಭಾರತದ ಬಾಹ್ಯಾಕಾಶ ಪ್ರಯಾಣವು ಈ ತತ್ವಶಾಸ್ತ್ರವನ್ನು ಪ್ರತಿಬಿಂಬಿಸುತ್ತದೆ. ಶತಮಾನಗಳಿಂದ, ಬಾಹ್ಯಾಕಾಶ ನಮ್ಮ ಕಲ್ಪನೆಗೆ ಸ್ಫೂರ್ತಿ ನೀಡಿತು. ಇಂದು ಬಾಹ್ಯಾಕಾಶ ಕ್ಷೇತ್ರ ಹವಾಮಾನ, ಬೆಳೆಗಳಿಂದ ಸಾಗರಗಳು ಮತ್ತು ಸಮುದಾಯಗಳವರೆಗೆ ಭೂಮಿಯ ಮೇಲಿನ ಜೀವನವನ್ನು ರೂಪಿಸುತ್ತದೆ. ಬಾಹ್ಯಾಕಾಶದ ಭರವಸೆ ಅನಂತವಾಗಿದೆ ಎಂದು ಅವರು ಹೇಳಿದರು.

---

ಭಾರತದ ಏರೋಸ್ಪೇಸ್ ಮತ್ತು ರಕ್ಷಣಾ ಮಾರುಕಟ್ಟೆ ೨೦೨೪ರಲ್ಲಿ ೩೦ ಶತಕೋಟಿ ಡಾಲರ್‌ನಷ್ಟಿದ್ದು, ೨೦೩೫ರ ವೇಳೆಗೆ ೬೧ ಶತಕೋಟಿ ಡಾಲರ್‌ಗೆ ದ್ವಿಗುಣಗೊಳ್ಳುವ ನಿರೀಕ್ಷೆಯಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ. ರಾಮ್ ಮೋಹನ್ ನಾಯ್ಡು ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ 'ವೋರ್ಟೆಕ್ಸ್' ಸಮ್ಮೇಳನದಲ್ಲಿ ಮಾತನಾಡಿದ ಅವರು, ಜಾಗತಿಕ ಏರೋಸ್ಪೇಸ್ ಪೂರೈಕೆ ಸರಪಳಿಯಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಏಕೀಕರಣಕ್ಕೆ ಈ ಉಪಕ್ರಮ ನೆರವಾಗಲಿದೆ ಎಂದರು.

೨೦೩೫ರವರೆಗೆ ದೇಶದ ಪ್ರಯಾಣಿಕರ ವಿಮಾನ ಸಂಚಾರವು ವರ್ಷದಿಂದ ವರ್ಷಕ್ಕೆ ಶೇಕಡಾ ೮.೯ರಷ್ಟು ಬೆಳೆಯುವ ನಿರೀಕ್ಷೆಯಿದ್ದು, ಇದು ವಿಶ್ವದ ಪ್ರಮುಖ ಆರ್ಥಿಕತೆಗಳಲ್ಲೇ ಅತ್ಯಂತ ವೇಗದ ಬೆಳವಣಿಗೆಯಾಗಲಿದೆ ಎಂದು ಸಚಿವರು ತಿಳಿಸಿದರು.

---

ಬ್ರಿಕ್ಸ್ ಶೃಂಗಸಭೆ ಇದೇ ತಿಂಗಳ ೧೨ ಮತ್ತು ೧೩ ರಂದು ನವದೆಹಲಿಯಲ್ಲಿ ನಡೆಯಲಿರುವ ಹಿನ್ನೆಲೆಯಲ್ಲಿ ದೆಹಲಿ ಪೊಲೀಸರು ಇಂದಿನಿಂದ ಇದೇ ತಿಂಗಳ ೧೪ರವರೆಗೆ ದೆಹಲಿಯಲ್ಲಿ ಡ್ರೋನ್‌ಗಳು ಹಾಗೂ ಇತರ ಸಣ್ಣ ವೈಮಾನಿಕ ಸಾಧನಗಳ ಹಾರಾಟಕ್ಕೆ ನಿಷೇಧ ವಿಧಿಸಿದ್ದಾರೆ.

ಭದ್ರತಾ ಕಾರಣಗಳಿಂದ ಈ ಕ್ರಮ ಕೈಗೊಳ್ಳಲಾಗಿದ್ದು, ನಿಷೇಧ ಉಲ್ಲಂಘಿಸುವವರ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ ೨೨೩ರಡಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

---

ಭಾರತೀಯ ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್ ಅವರು ಆಸ್ಟ್ರೇಲಿಯಾದ ಫ್ಲೀಟ್ ಕಮಾಂಡರ್ ರಿಯರ್ ಅಡ್ಮಿರಲ್ ಅನಿತಾ ವಿಲಿಯಮ್ಸ್ ಅವರನ್ನು ಸಿಡ್ನಿಯಲ್ಲಿ ಭೇಟಿಯಾಗಿ ಎರಡು ನೌಕಾಪಡೆಗಳ ನಡುವಿನ ಸಹಕಾರ ಮತ್ತು ಪರಸ್ಪರ ಕಾರ್ಯಸಾಧ್ಯತೆಯನ್ನು ಬಲಪಡಿಸುವ ಮಾರ್ಗಗಳನ್ನು ಚರ್ಚಿಸಿದ್ದಾರೆ ಎಂದು ಭಾರತೀಯ ನೌಕಾಪಡೆ ತಿಳಿಸಿದೆ.

ಮಾತುಕತೆಗಳು ಆಸ್ಟ್ರೇಲಿಯಾದ ವಿಕಸನಗೊಳ್ಳುತ್ತಿರುವ ಫ್ಲೀಟ್ ಸಾಮರ್ಥ್ಯಗಳು, ಯೋಜಿತ ಸ್ವಾಧೀನಗಳು ಮತ್ತು ಹೆಚ್ಚಿನ ಕಾರ್ಯಾಚರಣೆಯ ಸಂವಹನಕ್ಕಾಗಿ ಅವಕಾಶಗಳನ್ನು ಒಳಗೊಂಡಿವೆ. ಸ್ವಾಮಿನಾಥನ್ ಅವರು ರಾಯಲ್ ಆಸ್ಟ್ರೇಲಿಯನ್ ನೇವಿ ಬೇಸ್ ಮತ್ತು ಅದರ ಫ್ಲೀಟ್ ಮೂಲಸೌಕರ್ಯವಾಗಿರುವ ಊಒಂS ಕುಟ್ಟಬುಲ್‌ಗೆ ಸಹ ಪ್ರವಾಸ ಮಾಡಿದರು ಎಂದು ಭಾರತೀಯ ನೌಕಾಪಡೆ ತಿಳಿಸಿದೆ.

ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ಗೆ ಕೃಷ್ಣ ಸ್ವಾಮಿನಾಥನ್ ಅವರ ಭೇಟಿಯು ದ್ವಿಪಕ್ಷೀಯ ಕಡಲ ಮತ್ತು ರಕ್ಷಣಾ ಸಹಕಾರವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.

---

೧೮ ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಸಾಮಾಜಿಕ ಮಾಧ್ಯಮ ಮತ್ತು ಇತರ ಡಿಜಿಟಲ್ ವೇದಿಕೆಗಳಲ್ಲಿ ಸ್ವತಂತ್ರವಾಗಿ ಖಾತೆಗಳನ್ನು ರಚಿಸಲು ಮತ್ತು ನಿರ್ವಹಿಸಲು ಅವಕಾಶ ನೀಡದಂತೆ ನಿರ್ದೇಶನಗಳನ್ನು ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕುರಿತು ಸುಪ್ರೀಂ ಕೋರ್ಟ್ ಗುರುವಾರ ಕೇಂದ್ರಕ್ಕೆ ನೋಟಿಸ್ ನೀಡಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಮತ್ತು ವಿ. ಮೋಹನ ಅವರ ಪೀಠವು ವಕೀಲ ಸಕ್ಷಮ್ ಮಹೇಶ್ವರಿ ಅವರ ಮೂಲಕ ಜಸ್ಟ್ ರೈಟ್ಸ್ ಫಾರ್ ಚಿಲ್ಡ್ರನ್ ಅಲೈಯನ್ಸ್ ಸಲ್ಲಿಸಿದ ಅರ್ಜಿಯ ಮೇರೆಗೆ ನೋಟಿಸ್ ನೀಡಿದೆ.

---

ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರದ ಬೆಳವಣಿಗೆಯನ್ನು ವೇಗಗೊಳಿಸಲು ಸಂಪೂರ್ಣ ಸಹಕಾರ ಮತ್ತು ಸಮಾಜದ ವಿಧಾನವನ್ನು ಅಳವಡಿಸಿಕೊಂಡಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

ಸಚಿವರು ಇಂದು ನವದೆಹಲಿಯಲ್ಲಿ ಉದಯೋನ್ಮುಖ ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಸಮಾವೇಶ - ೨೦೨೬ ಕ್ಕೆ ಚಾಲನೆ ನೀಡಿ ಮಾತನಾಡಿದರು.

ತಂತ್ರಜ್ಞಾನ ನವೋದ್ಯಮಗಳು, ವಿಜ್ಞಾನಿಗಳು, ಉದ್ಯಮ, ಉದ್ಯಮಿಗಳು ಮತ್ತು ನೀತಿ ನಿರೂಪಕರು ಸೇರಿದಂತೆ ವಿವಿಧ ಪಾಲುದಾರರನ್ನು ಸಾಮಾನ್ಯ ವೇದಿಕೆಯಲ್ಲಿ ಒಟ್ಟುಗೂಡಿಸುತ್ತದೆ. ಇಂದು ವಿಜ್ಞಾನಿಗಳಿಗೆ ಮಾತ್ರ ಸೀಮಿತವಾಗಿಲ್ಲ. ವೈಜ್ಞಾನಿಕ ಸಂಶೋಧನೆಯನ್ನು ಯಶಸ್ವಿ, ಸುಸ್ಥಿರ ಮತ್ತು ವಾಣಿಜ್ಯಿಕವಾಗಿ ಕಾರ್ಯಸಾಧ್ಯವಾಗಿಸಲು ಸಂವಹನ, ನಿರ್ವಹಣೆ ಮತ್ತು ಮಾರುಕಟ್ಟೆ ಪರಿಣತಿಯು ಅಷ್ಟೇ ಮುಖ್ಯ ಎಂದು ಅವರು ಹೇಳಿದರು. ಸಮಾವೇಶ ಈ ವರ್ಷ ಮುಂದಿನ ತಿಂಗಳು ೨೭ ರಿಂದ ೨೯ ರವರೆಗೆ ನವದೆಹಲಿಯ ಭಾರತ್ ಮಂಟಪದಲ್ಲಿ ಮೂರು ದಿನಗಳ ಸಮಾವೇಶ ನಡೆಯಲಿದೆ.

---

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ೧೭೦ ಸದಸ್ಯರ ಸಂಪೂರ್ಣ ರಾಜ್ಯ ಕಾರ್ಯಕಾರಿ ಸಮಿತಿಯನ್ನು ಪ್ರಕಟಿಸಿದೆ. ರಾಜ್ಯಾಧ್ಯಕ್ಷ ಸಮಿಕ್ ಭಟ್ಟಾಚಾರ್ಯ ಅವರ ಸೂಚನೆಯಂತೆ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದ್ದು, ತಮ್ಲುಕ್ ಸಂಘಟನಾ ಜಿಲ್ಲೆಯ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಕೇಂದ್ರ ಶಿಕ್ಷಣ ಖಾತೆ ರಾಜ್ಯ ಸಚಿವ ಸುಕಾಂತ ಮಜುಂದಾರ್ ಅವರಿಗೆ ದಕ್ಷಿಣ ದಿನಾಜ್‌ಪುರ, ಕೇಂದ್ರ ಬಂದರು, ಹಡಗು ಮತ್ತು ಜಲಮಾರ್ಗಗಳ ಖಾತೆ ರಾಜ್ಯ ಸಚಿವ ಶಾಂತನು ಠಾಕೂರ್ ಅವರಿಗೆ ಬೋಂಗಾಂವ್ ಹಾಗೂ ಸಚಿವೆ ಅಗ್ನಿಮಿತ್ರ ಪಾಲ್ ಅವರಿಗೆ ಆಸನ್ಸೋಲ್ ಸಂಘಟನಾ ಜಿಲ್ಲೆಯ ಜವಾಬ್ದಾರಿ ನೀಡಲಾಗಿದೆ.

---

ಚೀನಾದ ಮೊಕಿಯಲ್ಲಿ ನಡೆಯುತ್ತಿರುವ ಮಹಿಳಾ ಜೂನಿಯರ್ ಏಷ್ಯಾ ಕಪ್ ಹಾಕಿ ಪಂದ್ಯಾವಳಿಯಲ್ಲಿ ಇಂದು ಭಾರತ, ಪಾಕಿಸ್ತಾನವನ್ನು ೧೯-೦ ಗೋಲುಗಳಿಂದ ಕ್ವಾರ್ಟರ್ ಫೈನಲ್‌ನಲ್ಲಿ ಸೋಲಿಸಿ ಸೆಮಿಫೈನಲ್ ಪ್ರವೇಶಿಸಿದೆ.

ಭಾರತದ ಪರ ಪೂಜಾ ಮಲಿಕ್ ಹ್ಯಾಟ್ರಿಕ್ ಗೋಲು ಗಳಿಸಿದರೆ, ಸನಿಕಾ ಚಂದ್ರಕಾಂತ್ ಮಾನೆ, ಮಧು ಸಿದಾರ್, ಸುಪ್ರಿಯಾ ಮತ್ತು ರೋಷ್ನಿ ಐಂಡ್ ತಲಾ ೨ ಗೋಲು ಗಳಿಸಿದರು.

ಇದೇ ೧೨ರಂದು ನಡೆಯಲಿರುವ ಸೆಮಿಫೈನಲ್‌ನಲ್ಲಿ ಭಾರತ, ದಕ್ಷಿಣ ಕೊರಿಯಾ ಅಥವಾ ಮಲೇಷ್ಯಾ ತಂಡವನ್ನು ಎದುರಿಸಲಿದೆ. ಎದುರಾಳಿಯನ್ನು ಅವರ ಕ್ವಾರ್ಟರ್ ಫೈನಲ್ ಪಂದ್ಯದ ವಿಜೇತರು ನಿರ್ಧರಿಸಲಿದ್ದಾರೆ.

____________________

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳೆ ಏಷ್ಯಾ ಕಪ್ - ೨೦೨೮ ಪಂದ್ಯಾವಳಿಯ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಮತ್ತು ಬಾಂಗ್ಲಾದೇಶ ಮಹಿಳಾ ತಂಡಗಳು ಮುಖಾಮುಖಿಯಾಗಲಿವೆ.

ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

__________ ಮುಕ್ತಾಯ ___________